# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

| | |
|---|---|
| | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,<br>ಬಿ.ಟಿ.ಎಂ.ಲೇಔಟ್ ಉಪ ವಿಭಾಗ,<br>16ನೇ ಮುಖ್ಯರಸ್ತೆ, ಬಿ.ಟಿ.ಎಂ.1ನೇ ಹಂತ,<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,<br>ಬೆಂಗಳೂರು-29, ದಿನಾಂಕ : 15/7/2021 |

## ವಾರ್ಡ್ ಸಮಿತಿ ಸಭೆಯ ಸೂಚನಾ ಪತ್ರ

ವಿಷಯ:- ವಾರ್ಡ್ ಸಮಿತಿ ಸಭೆಯನ್ನು ನಡೆಸುವ ಬಗ್ಗೆ.
ಉಲ್ಲೇಖ:1) ಘನ ಉಚ್ಚ ನ್ಯಾಯಾಲಯದ ಆದೇಶ ಸಂಖ್ಯೆ: ಡಬ್ಲ್ಯೂಪಿ 24739/2012,
ದಿನಾಂಕ: 10.11.2017
2) ಕೇಂದ್ರ ಕಛೇರಿ ಆದೇಶ ಸಂಖ್ಯೆ: ಬಿ12(5)/ಪಿಆರ್/35/2020-21,
ದಿನಾಂಕ: 02.11.2020

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶಗಳಂತೆ ಪ್ರತಿ ಮಾಹೆಯ 1ನೇ ಮತ್ತು 3ನೇ ಶನಿವಾರ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಬೇಕಾಗಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ದಕ್ಷಿಣವಲಯದ ವಾರ್ಡ್ ಸಂಖ್ಯೆ:146 ಲಕ್ಕಸಂದ್ರ 16ನೇ ಅಡ್ಡರಸ್ತೆ ಸಹಾಯಕ ಅಭಿಯಂತರರ ರವರ ಕಛೇರಿ ಬೆಂಗಳೂರು – 560030 ಇಲ್ಲಿ ಸಭೆಯನ್ನು ದಿನಾಂಕ: 17.07.2021 ರ ಬೆಳಿಗ್ಗೆ 10:00 ಗಂಟೆಗೆ ನಿಗಧಿಪಡಿಸಲಾಗಿದ್ದು, ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾಡ್ ಸಂಖ್ಯೆ 146 ಲಕ್ಕಸಂದ್ರಕ್ಕೆ ಸಂಬಂಧಿಸಿದ ಅಧಿಕಾರಿಗಳು ಸಭೆಗೆ ತಪ್ಪದೇ ಹಾಜರಾಗಲು ಈ ಮೂಲಕ ಕೋರುತ್ತೇನೆ.

:ಸಭಾ ಅಜೆಂಡಾ:

| | |
|---|---|
| 1) | ಹಿಂದಿನ ಸಭೆಯ ನಡುವಳಿಗಳನ್ನು ಓದಿ ರೆಕಾರ್ಡ್ ಮಾಡುವುದು |
| 2) | ವಾರ್ಡ್ ಸಮಿತಿಯನ್ನು ರಚಿಸುವ ಬಗ್ಗೆ |
| 3) | ವಾರ್ಡ್ ವ್ಯಾಪ್ತಿಯಲ್ಲಿನ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವ ವಿಚಾರ |
| 4) | ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿಗಳು ಮತ್ತು ರಸ್ತೆ ಗುಂಡಿಗಳ ದುರಸ್ಥಿಪಡಿಸುವ ಬಗ್ಗೆ |
| 5) | ಮಾನ್ಯ ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸಬಹುದಾದ ಇತರ ವಿಷಯಗಳ ಬಗ್ಗೆ ಚರ್ಚೆ |

Nagesh H.C 15/7/2021
ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:146, ಲಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ರವರಿಗೆ :-

1) ಸಹಾಯಕ ಕಾರ್ಯಪಾಲಕ ಅಭಿಯಂತರರು(ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
2) ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾ.ನಿ.ಅ.ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ ವಿಭಾಗ ಎಸ್-14 ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು ಉಪ ವಿಭಾಗ ಬೆಂಗಳೂರು ನೀರುಸರಬರಾಜು ಮಂಡಳಿ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
5) ತೋಟಗಾರಿಕೆ ಅಧೀಕ್ಷಕರು (ದಕ್ಷಿಣ) ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
6) ಆರೋಗ್ಯ ವೈದ್ಯಾಧಿಕಾರಿಗಳು ಬಿ.ಟಿ.ಎಂ ಲೇಔಟ್ ವಿಭಾಗದವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
7) ಸಹಾಯಕ ಕಂದಾಯ ಅಧಿಕಾರಿಗಳು ಬಿ.ಟಿ.ಎಂ ಉಪ ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ಉಪವಿಭಾಗ ದಕ್ಷಿಣ ವಲಯ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.

Scanned with CamScanner

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-146 ಲಕ್ಕಸಂದ್ರ ಕಛೇರಿಯಲ್ಲಿ ದಿನಾಂಕ: 17.07.2021 ರಂದು ನಡೆದ ಮೀಟಿಂಗ್ ನಡವಳಿಗಳು.

**ವಿಷಯ : ವಾರ್ಡ್ ಸಮಿತಿ ಸಭೆಯ ಬಗ್ಗೆ.**

**ಉಲ್ಲೇಖ :** 1. ವಾಡ್ ಕಮಿಟಿ ನೋಡಲ್ ಅಧಿಕಾರಿಗಳನ್ನು ನೇಮಿಸಿರುವ ಕಛೇರಿ ಆದೇಶದ ಸಂಖ್ಯೆ ಬಿ12(5)ಪಿ.ಆರ್/35/20-21, ದಿನಾಂಕ : 16.04.2021

* * * * *

ಉಲ್ಲೇಖ (1) ರ ಸಭಾ ಸೂಚನಾ ಪತ್ರದ ಅನುಸಾರ ದಿನಾಂಕ :17-07-2021 ರಂದು ಲಕ್ಕಸಂದ್ರ ವಾರ್ಡ್ ನಂ.146 ರ ಕಾರ್ಯಾಲಯದಲ್ಲಿ ವಾರ್ಡ್ ಕಮಿಡಿ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಯ ನಡವಳಿಗಳು.

ಹಾಜರಿದ್ದವರು :

| ಕ್ರ.ಸಂ. | ಹೆಸರು | ಸಮಿತಿಯ ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ.ಯೋಗೇಶ್.ಕೆ.ಪಿ ಕಾರ್ಯಪಾಲಕ ಅಭಿಯಂತರರು ಹಾಗೂ ನೋಡಲ್ ಅಧಿಕಾರಿಗಳು | ಅಧ್ಯಕ್ಷರು | 9902083785 |
| 2 | ಶ್ರೀ.ನರೇಶ್‌ಕುಮಾರ್.ಕೆ , ಸ.ಇಂ ವಾರ್ಡ್ 146(ಪ್ರಬಾರ) | ಸದಸ್ಯ ಕಾರ್ಯದರ್ಶಿ | 9844407499 |
| 3 | ಶ್ರೀ.ಸಂದೀಪ್, ಕೆಲಸ ಪರಿವೀಕ್ಷಕರು | | 9513342625 |
| 4 | ಶ್ರೀಮತಿ ರೂಪ ಹಿರಿಯ ಆರೋಗ್ಯಾಧಿಕಾರಿಗಳು | | 9591399429 |
| 5 | ಶ್ರೀ.ವಿಜಯ್ ಕಿರಿಯ ಆರೋಗ್ಯಾಧಿಕಾರು | | 9738721476 |
| 6 | ಶ್ರೀ ಲೋಕೇಶ್ ಎಲ್ ಬಿ.ಡಬ್ಲೂ.ಎಸ್.ಎಸ್.ಬಿ | | |
| 7 | ಶ್ರೀಮತಿ.ಸಾವಿತ್ರಿ ,ಕೆ ಮೇಲ್ವಿಚಾರಕರು ಒಣತ್ಯಾಜ್ಯ ಘಟಕ | | 7411536847 |

ದಿನಾಂಕ-17-07-2021 ರಂದು ಬೆಳಿಗ್ಗೆ 10.00 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟನಲ್ಲಿ ಮತ್ತು ಅಭಿವೃದ್ದಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅದ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

1. **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಸಭೆಗೆ ಹಾಜರಿದ್ದ ಶ್ರೀ. ವಿಜಯ್ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡಿ ಸಮರ್ಪಕವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯವನ್ನು ವಿಲೇವಾರಿ ಮಾಡುತ್ತಿದ್ದು, ಅನೇಕ ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಮುಂದುವರೆದು ಒಣತ್ಯಾಜ್ಯ ಸಂಗ್ರಹಣ ಘಟಕದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಒಣತ್ಯಾಜ್ಯವು ಸಂಗ್ರಹವಾಗಿದ್ದು ಕೂಡಲೇ ತೆರವುಗೊಳಿಸಲು ಕೋರಿದರು ಈ ಸಂಬಂಧ, ಸಭೆಯಲ್ಲಿ ಹಾಜರಿದ್ದ ಶ್ರೀಮತಿ. ಸಾವಿತ್ರಿ ಈಗಾಗಲೇ ಕ್ರಮ ವಹಿಸಲಾಗಿದೆಯೆಂದು ತಿಳಿಸಿಸದರು.

**ಕ್ರಮ:- ಈ ಬಗ್ಗೆ ಸಂಬಂಧ ಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘ.ತ್ಯಾನಿ ರವರು ಕ್ರಮವಹಿಸುವಂತೆ ಸೂಚಿಸಿದರು.**

Scanned with CamScanner

ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 146 ರವರು ಮಾತನಾಡಿ ಸಮರ್ಪಕವಾಗಿ ಮುಖ್ಯರಸ್ತೆಗಳಲ್ಲಿ ಸರಿಯಾಗಿ ಕಸ ಗುಡಿಸುತ್ತಿರುವುದಿಲ್ಲ ಹಾಗೂ ಕರ್ಬ್ ಪಕ್ಕದಲ್ಲಿ ಬಿದ್ದಿರುವ ಮಣ್ಣನ್ನು ಸಹ ತೆರವುಗೊಳಿಸಿರುವುದಿಲ್ಲವೆಂದು ತಿಳಿಸಿದಿರು, ಈ ಬಗ್ಗೆ ಶ್ರೀ. ವಿಜಯ್ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಸದರಿ ದೂರಿನ ಬಗ್ಗೆ ಕೂಡಲೇ ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು.

2 **ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಬಗ್ಗೆ.**

ಸಹಾಯಕ ಅಭಿಯಂತರರು ಮಾತನಾಡಿ, ಬನ್ನೇರುಘಟ್ಟ ಮುಖ್ಯರಸ್ತೆಯಲ್ಲಿ ಒಳಚರಂಡಿ ಕೊಳವೆ ಅಳವಡಿಸಲು ಅಗೆದಿರುವ ರಸ್ತೆಯನ್ನು ಯತಾಸ್ಥಿತಿಗೆ ತರಲು ತಿಳಿಸಿದರು ಹಾಗೂ ಕೂಡಲೇ ರಸ್ತೆಗುಂಡಿಗಳನ್ನು ಮುಚ್ಚಲು ಮತ್ತು ಅನುಪಯುಕ್ತ ಮಣ್ಣನ್ನು ತೆರವುಗೊಳಿಸಲು ತಿಳಿಸಿದರು. ಈ ಬಗ್ಗೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳ ಜೊತೆ ದೂರವಾಣಿ ಮುಖೇನ ಚರ್ಚಿಸಿ ಕ್ರಮವಹಿಸಲು ಕೋರಲಾಯಿತು.

**ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

17/11/2021

ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:146, ಲಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

**ಪ್ರತಿಯನ್ನು:**

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕಾಗಿ

Scanned with CamScanner